ELECTION URGENT

सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಕರ್ನಾಟಕ ರಾಜ್ಯ ಸಹಕಾರ ಮಾರಾಟ
ಮಂಡಳಿ ಕಟ್ಟಡ (ಹಿಂಭಾಗ) 1ನೇ ಮಹಡಿ
ನಂ.8, ಕನ್ನಿಂಗ್ ಹ್ಯಾಂ ರಸ್ತೆ,
ಬೆಂಗಳೂರು–560052 ದಿನಾಂಕ: 29-05-2018

## ರಾಜ್ಯ ಚುನಾವಣಾ ಆಯೋಗದ ತಿದ್ದುಪಡಿ ಆದೇಶ ಸಂಖ್ಯೆ: ರಾಚುಆ.33.ಇಯುಬಿ.2018, ಬೆಂಗಳೂರು, ದಿನಾಂಕ: 29–05–2018

ರಾಜ್ಯ ಚುನಾವಣಾ ಆಯೋಗದ ಆದೇಶ ಸಂಖ್ಯೆ: ರಾಚುಆ.33.ಇಯುಬಿ.2018 ದಿನಾಂಕ: 23–05–2018 ರಂತೆ ವಿವಿಧ ಕಾರಣಗಳಿಂದ ತೆರವಾಗಿರುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡುಗಳಿಗೆ ಉಪಚುನಾವಣೆಯನ್ನು ನಡೆಸಲು ಕರ್ನಾಟಕ ಮುನಿಸಿಪಾಲಿಟೀಸ್ (ಕೌನ್ಸಿಲರುಗಳ ಚುನಾವಣೆ) ನಿಯಮಗಳು 1977 ರ ನಿಯಮ 3(1) ರಂತೆ ಆದೇಶಿಸಲಾಗಿತ್ತು.

ದಿನಾಂಕ: 17–06–2018 ರಂದು ರಂಜಾನ್ ಹಬ್ಬದ ಆಚರಣೆ ಮಾಡುವ ಸಂಭವವಿರುವ ಕಾರಣ ಈ ಕೆಳಕಂಡಂತೆ ಪರಿಷ್ಕರಿಸಿ ಚುನಾವಣಾ ವೇಳಾಪಟ್ಟಿಯನ್ನು ನಿಗದಿಪಡಿಸಿ ಆದೇಶಿಸಿದೆ.

### ಪರಿಷ್ಕೃತ ಚುನಾವಣಾ ವೇಳಾಪಟ್ಟಿ

| | | |
|---|---|---|
| 1 | ಜಿಲ್ಲಾಧಿಕಾರಿ ರವರು ಚುನಾವಣಾ ಅಧಿಸೂಚನೆಯನ್ನು ಹೊರಡಿಸುವ ದಿನಾಂಕ ಮತ್ತು ದಿನ | 30-05-2018 ಬುಧವಾರ |
| 2 | ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನಾಂಕ ಮತ್ತು ದಿನ | 06-06-2018 ಬುಧವಾರ |
| 3 | ನಾಮಪತ್ರಗಳನ್ನು ಪರಿಶೀಲಿಸುವ ದಿನಾಂಕ ಮತ್ತು ದಿನ | 07-06-2018 ಗುರುವಾರ |
| 4 | ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನಾಂಕ ಮತ್ತು ದಿನ | 09-06-2018 ಶನಿವಾರ |
| 5 | ಮತದಾನ ಅವಶ್ಯವಿದ್ದರೆ, ಮತದಾನವನ್ನು ನಡೆಸಬೇಕಾದ ದಿನಾಂಕ ಮತ್ತು ದಿನ ಸಮಯ ಬೆಳಿಗ್ಗೆ 7.00 ಘಂಟೆಯಿಂದ ಸಾಯಂಕಾಲ 5.00 ಘಂಟೆವರೆಗೆ | 18-06-2018 ಸೋಮವಾರ |
| 6 | ಮರು ಮತದಾನ ಇದ್ದಲ್ಲಿ, ಮತದಾನದ ಸಮಯ ಬೆಳಿಗ್ಗೆ 7.00 ಘಂಟೆಯಿಂದ ಸಾಯಂಕಾಲ 5.00 ಘಂಟೆವರೆಗೆ | 19-06-2018 ಮಂಗಳವಾರ |
| 7 | ಮತಗಳ ಎಣಿಕೆಯ ದಿನಾಂಕ ಮತ್ತು ದಿನ ಬೆಳಿಗ್ಗೆ 8.00 ಘಂಟೆಯಿಂದ ತಾಲ್ಲೂಕಿನ ಕೇಂದ್ರ ಸ್ಥಳದಲ್ಲಿ | 20-06-2018 ಬುಧುವಾರ |
| 8 | ಚುನಾವಣೆಯನ್ನು ಯಾವ ದಿನಾಂಕಕ್ಕೆ ಮುಂಚೆ ಮುಕ್ತಾಯಗೊಳಿಸಬೇಕೋ ಆ ದಿನಾಂಕ ಮತ್ತು ದಿನ | 20-06-2018 ಬುಧುವಾರ |

ಜಿಲ್ಲಾಧಿಕಾರಿಗಳು ಆಯೋಗವು ಆದೇಶಿಸಿದ ಚುನಾವಣಾ ವೇಳಾಪಟ್ಟಿಯನ್ನು ಅನುಸರಿಸಿ ಕರ್ನಾಟಕ ಮುನಿಸಿಪಾಲಿಟೀಸ್ (ಎಲೆಕ್ಷನ್ ಆಫ್ ಕೌನ್ಸಿಲರ್ಸ್) ನಿಯಮಗಳು 1977 ರ ನಿಯಮ 8 ರ ಪ್ರಕಾರ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಿಗೆ ಸಂಬಂಧಿಸಿದ ಚುನಾವಣಾ ಅಧಿಸೂಚನೆಯನ್ನು ಫಾರಂ ನಂ.1ರಲ್ಲಿ ಹೊರಡಿಸತಕ್ಕದ್ದು. ಹಾಗೆ ಹೊರಡಿಸಲಾದ ಅಧಿಸೂಚನೆಯನ್ನು ಅದೇ ದಿನದಂದು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸತಕ್ಕದ್ದು. ಪ್ರಕಟಿತ ಅಧಿಸೂಚನೆಯ ಪ್ರತಿಗಳನ್ನು ಜಿಲ್ಲಾಧಿಕಾರಿ ಕಛೇರಿ, ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಗಳ ಕಛೇರಿ ಹಾಗೂ ಇನ್ನಿತರ ಮುಖ್ಯ ಸ್ಥಳಗಳಲ್ಲಿಯೂ ಸಹಾ ಪ್ರದರ್ಶಿಸತಕ್ಕದ್ದು ಹಾಗೂ ಆಯೋಗಕ್ಕೆ ಅಂದೇ ಇ–ಮೇಲ್ ಮೂಲಕ ಕಳುಹಿಸುವುದು.

ಅಧಿಸೂಚನೆಯ ಪ್ರತಿಯೊಂದಿಗೆ ಸಂಬಂಧಿಸಿದ ಚುನಾವಣಾಧಿಕಾರಿಗಳಿಗೆ ಕಳುಹಿಸಿಕೊಟ್ಟು ಅದೇ ದಿನದಂದು ಪ್ರಪತ್ರ–1ಎ ರಲ್ಲಿ ಚುನಾವಣಾ ನೋಟೀಸನ್ನು ಪ್ರಕಟಿಸುವಂತೆ ಸೂಚನೆಗಳನ್ನು ನೀಡತಕ್ಕದ್ದು ಹಾಗೂ ಚುನಾವಣೆ ಪ್ರಕ್ರಿಯೆಯನ್ನು ಪ್ರಕಟಿಸುವಂತೆ ಸೂಚಿಸುವುದು. ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆ ಹೆಸರು, ವಾರ್ಡುಗಳ ಸಂಖ್ಯೆ, ಮೀಸಲಾತಿ ವಿವರಗಳನ್ನು ಸ್ಪಷ್ಟವಾಗಿ ನಮೂದಿಸುವಂತೆ ಸೂಚನೆಗಳನ್ನು ನೀಡತಕ್ಕದ್ದು. ಸಾರ್ವಜನಿಕರ ಮಾಹಿತಿಗಾಗಿ ದಿನಪತ್ರಿಕೆಗಳಲ್ಲಿ ಹಾಗೂ ಸ್ಥಳೀಯ ಪತ್ರಿಕೆಗಳಲ್ಲಿ (ವೆಚ್ಚ ಬಾರದಂತೆ) ಪ್ರಕಟಿಸಲು ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವುದು. ಚುನಾವಣಾಧಿಕಾರಿ/ ಸಹಾಯಕ ಚುನಾವಣಾಧಿಕಾರಿಗಳನ್ನು ನೇಮಿಸಿ ನೇಮಕಾತಿ ಆದೇಶದ ಪ್ರತಿಯನ್ನು ಆಯೋಗಕ್ಕೆ ಕಳುಹಿಸುವುದು.

ಚುನಾವಣೆ ನಡೆಯುವ ನಗರ ಸ್ಥಳೀಯ ಸಂಸ್ಥೆಗಳ ವಾರ್ಡ್ ವ್ಯಾಪ್ತಿಯಲ್ಲಿ ಚುನಾವಣಾ ನೀತಿ ಸಂಹಿತೆಯು ದಿನಾಂಕ: 30-05-2018 ರಿಂದ ಜಾರಿಗೆ ಬರಲಿದ್ದು, ದಿನಾಂಕ: 20-06-2018 ರವರೆಗೆ ಜಾರಿಯಲ್ಲಿರುತ್ತದೆ. ಜಿಲ್ಲಾಧಿಕಾರಿಗಳು ಸದಾಚಾರ ಸಂಹಿತೆಯು ಯಾವುದೇ ರೀತಿಯಲ್ಲೂ ಉಲ್ಲಂಘನೆಯಾಗದಂತೆ ನೋಡಿಕೊಳ್ಳತಕ್ಕದ್ದು.

ಆದೇಶಾನುಸಾರ

(ಅರ್ಚನ. ಎಂ.ಎಸ್.) 29/5/2018

ಅಧೀನ ಕಾರ್ಯದರ್ಶಿ

ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಇವರಿಗೆ

1. ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ, ಬೆಂಗಳೂರು ರವರಿಗೆ ಮಾಹಿತಿಗಾಗಿ.
2. ಜಿಲ್ಲಾಧಿಕಾರಿಗಳು ಬೆಂಗಳೂರು ಗ್ರಾಮಾಂತರ, ಶಿವಮೊಗ್ಗ, ತುಮಕೂರು, ಬೀದರ್, ಬೆಳಗಾವಿ, ಕೋಲಾರ ಹಾಗೂ ವಿಜಯಪುರ ಜಿಲ್ಲೆ.
3. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಈ ಆದೇಶವನ್ನು ಈ ದಿನವೇ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ 50 ಪ್ರತಿಗಳನ್ನು ರಾಜ್ಯ ಚುನಾವಣಾ ಆಯೋಗಕ್ಕೆ ಕಳುಹಿಸಿಕೊಡುವುದು.